**SC No.102/2023**
**PW-3**
**CW-5**

ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ: 57)
ನಮೂನೆ ಸಂಖ್ಯೆ: 4

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರ ನ್ಯಾಯಾಲಯದಲ್ಲಿ, ಬೆಳಗಾವಿ.**

## ಎಸ್.ಸಿ ನಂ: **102/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ನಂದಾ ಪಾಟೀಲ | ಪ್ರಾಸಾ: 3 |
| ತಂದೆಯ ಹೆಸರು | : | ರಂಜಿತ ಪಾಟೀಲ | ಚಾಸಾ: 5 |
| ವಯಸ್ಸು | : | 55 ವರ್ಷ | ದಿನಾಂಕ 16.06.2026 ರಂದು ಸಾಕ್ಷಿದಾರರಿಗೆ ಸತ್ಯಪ್ರತಿಜ್ಞೆಯನ್ನು ಬೋಧಿಸಲಾಯಿತು. |
| ಉದ್ಯೋಗ | : | ಖಾಸಗಿ ನೌಕರಿ | |
| ವಾಸಸ್ಥಳ | : | ಸರಸ್ವತಿ ನಗರ, ಬೆಳಗಾವಿ | |

**ಮುಖ್ಯವಿಚಾರಣೆ: ಮಾನ್ಯ ಸರ್ಕಾರಿ ಅಭಿಯೋಜಕರಿಂದ:**

ನನಗೆ ಚಾಸಾ 1, 4 ಮತ್ತು 6 ರಿಂದ 8 ಗೊತ್ತು. ಚಾಸಾ 4 ನನ್ನ ಗಂಡ. ನನಗೆ ಆರೋಪಿತರ ಪರಿಚಯ ಇರುವುದಿಲ್ಲ. ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆ ಆಗಿರುವುದಿಲ್ಲ. ಆರೋಪಿತರು ನನಗಾಗಲಿ, ಚಾಸಾ 1 ಮತ್ತು 4 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಕಲ್ಲು ಮತ್ತು ಬಡಿಗೆಯಿಂದ ಹೊಡೆದು ಹಲ್ಲೆ ಮಾಡಿಲ್ಲ. ಆರೋಪಿತರು ನನಗೆ ಅವಮಾನ ಮಾಡಿರುವುದಿಲ್ಲ. ಆರೋಪಿತರು ಈ ಕೃತ್ಯ ಮಾಡಿರುತ್ತಾರೆ ಎಂದು ಹೇಳಿ ಯಾವುದೇ ಹೇಳಿಕೆಯನ್ನು ನಾನು ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಅಭಿಯೋಜನೆಯ ಪರ ಕೇಸಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿಯುವುದು ಕಂಡುಬರುತ್ತದೆ, ಈ ಕಾರಣದಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ.)

**SC No.102/2023**
**PW-3**
**CW-5**

ಪಾಟೀ ಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ

2. ದಿನಾಂಕ 14.02.2019 ರಂದು ರಾತ್ರಿ 11.30 ಗಂಟೆಗೆ ಬೆಳಗಾವಿಯ ಗಣೇಶಪೂರ ಸರಸ್ವತಿ ನಗರದ ಪಾರ್ಥ ರೆಸಿಡೆನ್ಸಿ ಮುಂಭಾಗದಲ್ಲಿ ಆರೋಪಿತರು ಅವರ ಹುಟ್ಟುಹಬ್ಬವನ್ನು ಆಚರಿಸುತ್ತಿದ್ದ ಕಾಲಕ್ಕೆ ಚೀರಾಟ ಮಾಡುತ್ತಿದ್ದು ಅದನ್ನು ನಾನು ಮತ್ತು ಚಾಸಾ 1 ಮತ್ತು 4 ರವರು ಪ್ರಶ್ನಿಸಿ ಬುದ್ಧಿವಾದ ಹೇಳಿದಾಗ ಅವರು ನಮ್ಮೊಂದಿಗೆ ಜಗಳ ತೆಗೆದಿದ್ದರು ಎನ್ನುವುದು ನಿಜವಲ್ಲ. ಆರೋಪಿತರು ನನ್ನನ್ನು, ಚಾಸಾ 1 ಮತ್ತು 4 ರವರನ್ನು ಅಡ್ಡಗಟ್ಟಿ ನಮಗೆ ಅವಾಚ್ಯ ಶಬ್ದಗಳಿಂದ ಬೈದು ನನಗೆ ಕಲ್ಲಿನಿಂದ ಮತ್ತು ಬಡಿಗೆಯಿಂದ ಹೊಡೆದು ಹಲ್ಲೆ ಮಾಡಿ ಕೊಲೆ ಮಾಡುವ ಪ್ರಯತ್ನ ಮಾಡಿದ್ದರು ಎನ್ನುವುದು ನಿಜವಲ್ಲ. ಆರೋಪಿತರು ನನ್ನನ್ನು ಎಳೆದಾಡಿ ನನಗೆ ಕಲ್ಲಿನಿಂದ ಹೊಡೆದು ಹಲ್ಲೆ ಮಾಡಿ ಮಾನಭಂಗ ಮಾಡುವ ಪ್ರಯತ್ನ ಮಾಡಿದ್ದರು ಎನ್ನುವುದು ನಿಜವಲ್ಲ. ಈ ಬಗ್ಗೆ ನಾನು ದಿ. 15.02.2019 ರಂದು ಕ್ಯಾಂಪ ಪೋ.ಠಾಣೆಗೆ ಹಾಜರಾಗಿ ನಿ.ಪಿ.4 ರಂತೆ ಒಂದು ಹೇಳಿಕೆಯನ್ನು ಕೊಟ್ಟಿದ್ದೆ ಎನ್ನುವುದು ನಿಜವಲ್ಲ.

3. ನಾವು ಮತ್ತು ಆರೋಪಿತರು ಈಗ ರಾಜೀ ಮಾಡಿಕೊಂಡಿದ್ದೇವೆ ಎನ್ನುವುದು ನಿಜ. ಆ ಕಾರಣಕ್ಕಾಗಿ ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎನ್ನುವುದು ನಿಜವಲ್ಲ.

ಪಾಟೀ ಸವಾಲುಃ ಆರೋಪಿತರ ಪರವಾಗಿಃ ಶ್ರೀ ಎಸ್.ಬಿ.ಎಮ್ ವಕೀಲರಿಂದಃ

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸರಿ ಇದೆ,

(ಮಂಜುನಾಥ ನಾಯಕ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಬೆಳಗಾವಿ.